सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ನಂ.8, 1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳ ಕಟ್ಟಡ (ಹಿಂಭಾಗ),
ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು–560 052.

ವಿಷಯ: ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಸಾರ್ವತ್ರಿಕ ಚುನಾವಣೆಗಳು, 2016 – ಚುನಾವಣಾ ಪ್ರಚಾರದ ಸಮಯ ಮುಕ್ತಾಯಗೊಂಡ ನಂತರ ಆ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಯಾವುದೇ ಸಭೆ, ಮೆರವಣಿಗೆಗಳನ್ನು ನಡೆಸುವುದನ್ನು ನಿರ್ಬಂಧಿಸುವ ಬಗ್ಗೆ.

* * * * *

ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಸಾರ್ವತ್ರಿಕ ಚುನಾವಣೆಗಳು, 2016 ರ ಚುನಾವಣಾ ಪ್ರಚಾರದ ಸಮಯ ಮುಕ್ತಾಯಗೊಂಡ ನಂತರ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಚುನಾವಣೆ ಸಂಬಂಧದ ಯಾವುದೇ ಸಭೆ, ಮೆರವಣಿಗೆಗಳನ್ನು ನಡೆಸುವುದನ್ನು ನಿರ್ಬಂಧಿಸಲು ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಆದೇಶ ಸಂಖ್ಯೆ: ರಾಚುಆ 34 ಟಿಜೆಡ್‌ಪಿ 2016, ಬೆಂಗಳೂರು ದಿನಾಂಕ: 15–02–2016**

ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಸಾರ್ವತ್ರಿಕ ಚುನಾವಣೆಗಳು, 2016 – ದಿನಾಂಕ:20–02–2016 ರಂದು **ಎರಡನೇ ಹಂತದಲ್ಲಿ ಮತದಾನ ನಡೆಯುವ ಜಿಲ್ಲೆಗಳಿಗೆ ಮಾತ್ರ ಅನ್ವಯಿಸುವಂತೆ,** ಚುನಾವಣಾ ಪ್ರಚಾರದ ಸಮಯ ಮುಕ್ತಾಯವಾದ ನಂತರ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಆಯೋಗವು ಭಾರತ ಸಂವಿಧಾನದ ಅನುಚ್ಛೇದ 243–ಕೆ ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡಂತೆ ಆದೇಶಿಸಿದೆ.

1. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 35 ರಂತೆ ಮತದಾನದವು ಪ್ರಾರಂಭವಾಗುವ ಸಮಯಕ್ಕೆ ಮುಂಚೆ ನಲವತ್ತೆಂಟು ಗಂಟೆಗಳೊಳಗೆ ಅಥವಾ ಮತದಾನ ನಡೆಯುವ ದಿನಾಂಕದಂದು ಅಥವಾ ದಿನಾಂಕಗಳಂದು ಯಾವುದೇ ಸಾರ್ವಜನಿಕ ಸಭೆಯು ನಡೆಯತಕ್ಕದ್ದಲ್ಲ.
2. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 26 ರಂತೆ ಯಾರೇ ವ್ಯಕ್ತಿಯು ಮತದಾನ ನಡೆಯುವ ದಿನಾಂಕದಂದು ಅಥವಾ ದಿನಾಂಕಗಳಲ್ಲಿ ಮತದಾನ ಕೇಂದ್ರವನ್ನೊಳಗೊಂಡಂತೆ ಮತದಾನ ಕೇಂದ್ರದಿಂದ ನೂರು ಮೀಟರುಗಳ ಅಂತರದೊಳಗೆ ಯಾವುದೇ ಸಾರ್ವಜನಿಕ ಅಥವಾ ಖಾಸಗಿ ಸ್ಥಳದಲ್ಲಿ ಕೆಳಕಂಡ ಯಾವುದೇ ಕಾರ್ಯಗಳನ್ನು ಮಾಡತಕ್ಕದ್ದಲ್ಲ, ಎಂದರೆ;
   (ಎ) ಮತಗಳಿಗಾಗಿ ಪ್ರಚಾರ ಮಾಡುವುದು; ಅಥವಾ
   (ಬಿ) ಯಾವುದೇ ಮತದಾರರ ಮತವನ್ನು ಕೋರುವುದು; ಅಥವಾ
   (ಸಿ) ಯಾವುದೇ ನಿರ್ದಿಷ್ಟ ಅಭ್ಯರ್ಥಿಗೆ ಮತ ನೀಡುವಂತೆ/ನೀಡಬಾರದಂತೆ ಯಾವುದೇ ಮತದಾರನ ಮನ ಒಲಿಸುವುದು; ಅಥವಾ
   (ಡಿ) ಚುನಾವಣೆಯಲ್ಲಿ ಮತ ನೀಡದಂತೆ ಯಾವುದೇ ಮತದಾರರ ಮನ ಒಲಿಸುವುದು; ಅಥವಾ
   (ಇ) ಯಾವುದೇ ನೋಟೀಸು (ಚುನಾವಣೆಗೆ ಸಂಬಂಧಿಸಿದ ಅಧಿಕೃತ ನೋಟೀಸಿನ ಹೊರತು) ಅಥವಾ ಚಿಹ್ನೆಯನ್ನು ಪ್ರದರ್ಶಿಸುವುದು.

3. ಚುನಾವಣಾ ಪ್ರಚಾರ ಸಮಯವು ಮತದಾನ ಪ್ರಾರಂಭವಾಗುವ 48 ಗಂಟೆಗಳ ಮುಂಚೆ, ಅಂದರೆ, ದಿನಾಂಕ: 18-02-2016 ರ ಬೆಳಿಗ್ಗೆ 7-00 ಗಂಟೆಗೆ ಮುಕ್ತಾಯಗೊಳ್ಳುತ್ತದೆ. ಆ ಸಮಯದ ನಂತರ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳ ಬೆಂಬಲಕ್ಕಾಗಿ ಪಂಚಾಯತಿ ವ್ಯಾಪ್ತಿಯ ಹೊರಗಿನಿಂದ ಚುನಾವಣಾ ಪ್ರಚಾರಕ್ಕಾಗಿ ತಾರಾ ಪ್ರಚಾರಕರು ಮತ್ತು ಇತರೆ ವ್ಯಕ್ತಿಗಳನ್ನು ಕರೆಯಿಸಿಕೊಂಡಿದ್ದಲ್ಲಿ ಅಂತಹ ಪ್ರಚಾರಕ್ಕೆ ಸಂಬಂಧಿಸಿದಂತಹ ವ್ಯಕ್ತಿಗಳು ಆ ಪಂಚಾಯತಿ ವ್ಯಾಪ್ತಿಯನ್ನು ಬಿಡುವಂತೆ ಅಗತ್ಯ ಕ್ರಮ ಜರುಗಿಸುವುದು. ಈ ಆದೇಶವನ್ನು ಪಾಲಿಸಲು ಎಲ್ಲಾ ಅಭ್ಯರ್ಥಿಗಳು/ ಅವರ ಏಜೆಂಟರುಗಳು/ ರಾಜಕೀಯ ಪಕ್ಷದ ಪದಾಧಿಕಾರಿಗಳು/ ಮುಖಂಡರುಗಳ ತಿಳುವಳಿಕೆಗೆ ತರತಕ್ಕದ್ದು.

4. ಜಿಲ್ಲಾಡಳಿತವು/ಪೋಲೀಸ್ ಇಲಾಖೆಯು ಈ ಕೆಳಕಂಡ ವಿಷಯಗಳ ಬಗ್ಗೆ ಸೂಕ್ತ ನಿಗಾ ಇಡುವಂತೆ/ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದೆ.

(i) ದಿನಾಂಕ: 18-02-2016 ರ ಸಾಯಂಕಾಲ 6-00 ಗಂಟೆಯ ನಂತರ ಮತದಾರರಲ್ಲದ ಬೆಂಬಲಿಗರು/ ರಾಜಕೀಯ ಪಕ್ಷದ ಪದಾಧಿಕಾರಿಗಳು/ ಮುಖಂಡರುಗಳು/ ಪಕ್ಷದ ಕಾರ್ಯಕರ್ತರು/ ಮೆರವಣಿಗೆ ಕಾರ್ಯ ನಿರ್ವಹಿಸುವವರು/ ಪ್ರಚಾರ ಕಾರ್ಯ ನಿರ್ವಹಿಸುವವರು ಇತ್ಯಾದಿ ಆ ಪಂಚಾಯತಿ ವ್ಯಾಪ್ತಿಯಲ್ಲಿ ತಮ್ಮ ವಾಸ್ತವ್ಯ ಮುಂದುವರಿಸಿದಲ್ಲಿ ಚುನಾವಣೆಯ ಮುಕ್ತ ಮತ್ತು ನಿಷ್ಪಕ್ಷ ವಾತಾವರಣಕ್ಕೆ ಧಕ್ಕೆಯುಂಟಾಗುವ ಸಂಭವವಿರುತ್ತದೆ. ಆದ್ದರಿಂದ, ಜಿಲ್ಲಾಡಳಿತ/ ಪೋಲೀಸ್ ಇಲಾಖೆಯು ದಿನಾಂಕ: 18-02-2016 ರ ಸಾಯಂಕಾಲ 6-00 ಗಂಟೆಯ ನಂತರ ಆಯಾ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಯಲ್ಲಿ ಮತದಾರರಲ್ಲದ ಮೇಲೆ ತಿಳಿಸಿದಂತಹ ವ್ಯಕ್ತಿಗಳು ಆ ಪಂಚಾಯತಿ ವ್ಯಾಪ್ತಿಯಿಂದ ಹೊರಗೆ ಹೋಗಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು. ಇಲ್ಲದಿದ್ದಲ್ಲಿ ಹೊರಗೆ ಕಳುಹಿಸುವ ಬಗ್ಗೆ ಅಗತ್ಯ ಕ್ರಮ ಜರುಗಿಸುವಂತೆ ಆದೇಶಿಸಿದೆ. ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಕ್ರಮ ಕೈಗೊಳ್ಳತಕ್ಕದ್ದು.

(ii) ಆ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿರುವ ಕಲ್ಯಾಣ ಮಂಟಪ, ಸಮುದಾಯ ಭವನ, ಇತರೆ ಸ್ಥಳಗಳಲ್ಲಿ ಆ ಪಂಚಾಯತಿ ವ್ಯಾಪ್ತಿಗೆ ಒಳಪಡದ ಮೇಲೆ ತಿಳಿಸಿದಂತಹ ವ್ಯಕ್ತಿಗಳು ಇದ್ದಾರೆಯೇ ಎಂಬ ಬಗ್ಗೆ ತಪಾಸಣೆ ಮಾಡುವುದು;

(iii) ಆ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿರುವ ಪ್ರವಾಸಿಗರ ವಸತಿ ಗೃಹಗಳಲ್ಲಿ ಮತ್ತು ಪ್ರವಾಸ ಮಂದಿರದಲ್ಲಿ ಅಂತಹ ವ್ಯಕ್ತಿಗಳು ಇದ್ದಾರೆಯೇ ಎಂಬ ಬಗ್ಗೆ ಪರಿಶೀಲಿಸುವುದು.

(iv) ಪಂಚಾಯಿತಿ ವ್ಯಾಪ್ತಿಯ ಗಡಿಯಲ್ಲಿ ಚೆಕ್‌ಪೋಸ್ಟ್‌ಗಳನ್ನು ನಿರ್ಮಿಸಿ ವಾಹನಗಳು ಹಾಗೂ ಜನರ ಸಂಚಾರದ ಮೇಲೆ ನಿಗಾವಹಿಸುವುದು.

(v) ಯಾವುದೇ ರೀತಿ ನೀತಿ ಸಂಹಿತೆಯು ಉಲ್ಲಂಘನೆಯಾಗದಂತೆ ಕ್ರಮ ವಹಿಸುವುದು.

ಆದೇಶಾನುಸಾರ

(ಆರ್.ಚಂದ್ರಶೇಖರ್)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ.

**ರವರಿಗೆ:**

1. ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉಡುಪಿ, ಹಾಸನ, ಕೊಡಗು, ಮೈಸೂರು, ಮಂಡ್ಯ, ಚಾಮರಾಜನಗರ, ಬೀದರ್, ಬಳ್ಳಾರಿ, ರಾಯಚೂರು, ಕಲಬುರಗಿ, ಯಾದಗಿರಿ, ಕೊಪ್ಪಳ ಮತ್ತು ವಿಜಯಪುರ ಜಿಲ್ಲೆಗಳು.
2. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಮೈಸೂರು, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉಡುಪಿ, ಹಾಸನ, ಕೊಡಗು, ಮಂಡ್ಯ, ಚಾಮರಾಜನಗರ, ಕಲಬುರಗಿ, ಬೀದರ್, ರಾಯಚೂರು, ಬಳ್ಳಾರಿ, ಯಾದಗಿರಿ, ಕೊಪ್ಪಳ ಮತ್ತು ವಿಜಯಪುರ ಜಿಲ್ಲೆಗಳು.